# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110

ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ಸಂ. ಬಿಐಎಎಪಿಎ/ಟಿಪಿ/ಸಿಸಿ/424/2024-25 |3425 ದಿನಾಂಕ: 20 MAR 2025

## "ಪ್ರಾರಂಭಿಕ ಪ್ರಮಾಣ ಪತ್ರ"

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)
(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)

**ವಿಷಯ:** ಯಲಹಂಕ ತಾಲ್ಲೂಕು, ಜಾಲ ಹೋಬಳಿ, ನವರತ್ನ ಅಗ್ರಹಾರ ಗ್ರಾಮದ ಸ.ನಂ 118/7, 118/8, 118/11 & 118/12 ರಲ್ಲಿ ಒಟ್ಟು 2ಎ-00ಗು ಅಥವಾ 8093.6 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಅನುಮೋದಿತ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸ ನಕ್ಷೆಯ ಪ್ರದೇಶದಲ್ಲಿನ ಖಾತಾ ಸಂಖ್ಯೆ: 359/359-361/361-426/426-427/427 (ಸ್ವತ್ತಿನ ಸಂಖ್ಯೆ. 150200200900400 385) ರಲ್ಲಿ ಟವರ್ ಸಂಖ್ಯೆ – ಎ ರಲ್ಲಿ 01 Basement + G + 04 UF, ಟವರ್ ಸಂಖ್ಯೆ – ಬಿ ರಲ್ಲಿ 01 Basement + G + 04 UF ಮತ್ತು ಟವರ್ ಸಂಖ್ಯೆ – ಸಿ ರಲ್ಲಿ 01 Basement + G + 04 UF ಗಳನ್ನು ಒಳಗೊಂಡ 57 ವಸತಿ ಘಟಕಗಳ ಕಟ್ಟಡಗಳನ್ನು ನಿರ್ಮಿಸಲು ಕಟ್ಟಡ ನಕ್ಷೆಗಳಿಗೆ ಅನುಮೋದನೆ ನೀಡಿ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿ ಸಲ್ಲಿಸಿರುವ ಅರ್ಜಿಯ ಬಗ್ಗೆ.

**ಉಲ್ಲೇಖ:**
1) ಈ ಪ್ರಾಧಿಕಾರದಿಂದ ಏಕನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಿದ ಆದೇಶ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ/ಎಲ್‌ಎಒ/ಏನಿ/64/2023-24/2024-25/1515, ದಿನಾಂಕ: 01/10/2024.
2) ಅರ್ಜಿದಾರರ ಅರ್ಜಿ ಸಂಖ್ಯೆ & ದಿನಾಂಕ : 6499 & ದಿನಾಂಕ: 17/01/2025.
3) ಈ ಕಛೇರಿ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 21/02/2025.
4) ಪ್ರಾಧಿಕಾರಕ್ಕೆ ಶುಲ್ಕವನ್ನು ಪಾವತಿಸಿರುವ ವಿವರ : ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ 0014213 ದಿನಾಂಕ: 05/03/2025 ರಲ್ಲಿ ರೂ. 16,42,430/- (ಹದಿನಾರು ಲಕ್ಷದ ನಲವತ್ತೆರಡು ಸಾವಿರದ ನಾಲ್ಕು ನೂರ ಮೂವತ್ತು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಿರುತ್ತಾರೆ.

* * * * *

"ಮೆ|| ಇಕೋಸ್ ಆಫ್ ಈಡನ್" ರ ಪರವಾಗಿ ಪಾಲುದಾರರು ಶ್ರೀ ಮೇಡ ಶ್ರೀಧರ್ ಬಿನ್ ಶ್ರೀ ಮೇಡ ಸೂರ್ಯನಾರಾಯಣಶೆಟ್ಟಿ ಮತ್ತು ಶ್ರೀಮತಿ ಸುಮ ಶ್ರೀಧರ್ ಕೋಂ ಶ್ರೀ ಮೇಡ ಶ್ರೀಧರ್ ರವರುಗಳು ಯಲಹಂಕ ತಾಲ್ಲೂಕು, ಜಾಲ ಹೋಬಳಿ, ನವರತ್ನ ಅಗ್ರಹಾರ ಗ್ರಾಮದ ಸ.ನಂ 118/7, 118/8, 118/11 & 118/12 ರಲ್ಲಿ ಒಟ್ಟು 2ಎ-00ಗು ಅಥವಾ 8093.6 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಅನುಮೋದಿತ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸ ನಕ್ಷೆಯ ಪ್ರದೇಶದಲ್ಲಿನ ಖಾತಾ ಸಂಖ್ಯೆ: 359/359-361/361-426/426-427/427 (ಸ್ವತ್ತಿನ ಸಂಖ್ಯೆ. 150200200900400385) ರಲ್ಲಿ ಟವರ್ ಸಂಖ್ಯೆ – ಎ ರಲ್ಲಿ 01 Basement + G + 04 UF, ಟವರ್ ಸಂಖ್ಯೆ – ಬಿ ರಲ್ಲಿ 01 Basement + G + 04 UF ಮತ್ತು ಟವರ್ ಸಂಖ್ಯೆ – ಸಿ ರಲ್ಲಿ 01 Basement + G + 04 UF ಗಳನ್ನು ಒಳಗೊಂಡ 57 ವಸತಿ ಘಟಕಗಳ ಕಟ್ಟಡಗಳನ್ನು ನಿರ್ಮಿಸಲು ಕಟ್ಟಡ ನಕ್ಷೆಗಳಿಗೆ ಅನುಮೋದನೆ ನೀಡಿ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿ ಉಲ್ಲೇಖ (2) ರಂತೆ ಅರ್ಜಿ ಸಲ್ಲಿಸಲಾಗಿತ್ತು. ಉಲ್ಲೇಖ (3) ರಲ್ಲಿನ ಈ ಕಛೇರಿ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು ಪಾವತಿಸಲು ಹಾಗೂ ಅಗತ್ಯ

ದಾಖಲೆಗಳೊಂದಿಗೆ ಉದ್ದೇಶಿತ ಕಟ್ಟಡದ ನಕ್ಷೆಯ ನೀಲಿ ಪ್ರತಿಗಳನ್ನು ಅರ್ಜಿದಾರರು/ಅಭಿಯಂತರರ ಸಹಿಗಳೊಂದಿಗೆ ಸಲ್ಲಿಸಲು ಸೂಚಿಸಲಾಗಿತ್ತು.

ಉಲ್ಲೇಖ (4) ರಲ್ಲಿ ಅರ್ಜಿದಾರರು ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಅಗತ್ಯ ದಾಖಲೆಗಳೊಂದಿಗೆ ಉದ್ದೇಶಿತ ಕಟ್ಟಡದ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಆದ್ದರಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಗಿನ ನಿಬಂಧನೆಗಳೊಂದಿಗೆ ನೀಡಲಾಗಿದೆ.

**ನಿಬಂಧನೆಗಳು**

1. ಈ ಪ್ರಾಧಿಕಾರದಿಂದ ಏಕನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಿದ ಆದೇಶ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ/ಎಲ್‌ಎಒ/ಏನಿ/64/2023–24/2024–25/1515, ದಿನಾಂಕ: 01/10/2024 ರ ಆದೇಶದಲ್ಲಿ ವಿಧಿಸಲಾಗಿರುವ ಎಲ್ಲಾ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.
2. ಯೋಜಿಸಿರುವ ಕಟ್ಟಡಗಳನ್ನು ವಸತಿ ಉದ್ದೇಶಕ್ಕಾಗಿಯೇ ಉಪಯೋಗಿಸಬೇಕು.
3. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ **ದಿನಾಂಕ: 20/03/2025 ರಿಂದ 19/03/2027 ರವರೆಗೆ** ಮಾತ್ರ ನೀಡಲಾಗಿರುತ್ತದೆ.
4. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ದೊಡ್ಡಜಾಲ ಗ್ರಾಮ ಪಂಚಾಯ್ತಿಯಿಂದ** ಪಡೆಯದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಬಾರದು.
5. ವಸತಿ ಉಪಯೋಗದ ಕಟ್ಟಡಗಳನ್ನು ನಿರ್ಮಿಸಲು ಪರವಾನಿಗೆಯನ್ನು **ದೊಡ್ಡಜಾಲ ಗ್ರಾಮ ಪಂಚಾಯ್ತಿಯಿಂದ** ಕಡ್ಡಾಯವಾಗಿ ಪಡೆಯತಕ್ಕದ್ದು.
6. ವಸತಿ ಉಪಯೋಗದ ಕಟ್ಟಡಗಳನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ನಿರ್ಮಿಸಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಬೆಳವಣಿಗೆಯಲ್ಲಿನ ಯಾವುದೇ ಬದಲಾವಣೆಯನ್ನು ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಮಾಡತಕ್ಕದ್ದಲ್ಲ.
7. ವಸತಿ ಉಪಯೋಗದ ಕಟ್ಟಡ ನಿರ್ಮಿಸಲು ನಕ್ಷೆಯಲ್ಲಿ ಬಿಟ್ಟಿರುವಂತೆ ನಡುಜಾಗವನ್ನು ಬಿಟ್ಟು ಕಟ್ಟಡ ನಿರ್ಮಿಸತಕ್ಕದ್ದು.
8. ವಸತಿ ಉಪಯೋಗದ ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.
9. ವಸತಿ ಉಪಯೋಗದ ಕಟ್ಟಡದ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.
10. ಪ್ರಸ್ತಾವನೆ ಸಂಬಂಧ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾರವರ ಪತ್ರ ಸಂಖ್ಯೆ: ಬಿಐಎಎಲ್/ಸೌತ್/ಬಿ/052724/1044179, ದಿನಾಂಕ: 12/06/2024 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
11. ಪ್ರಸ್ತಾವನೆ ಸಂಬಂಧ ಅಗ್ನಿ ಶಾಮಕ ಇಲಾಖೆ ರವರ ಕಛೇರಿ ಪತ್ರ ಸಂಖ್ಯೆ : KSFES/GBC(1)/576 Docket no: KSFES/NOC/526/2024 ದಿನಾಂಕ: 17/01/2025 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

ಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ
ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110
ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in

12. ಅರ್ಜಿದಾರರು ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಪ್ರಾರಂಭಿಸುವ ಮೊದಲು State Level Environment Impact Assessment Authority-Karanataka ರವರಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದು, ಸದರಿ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
13. ಅರ್ಜಿದಾರರು ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ರವರ ಪತ್ರ ಸಂಖ್ಯೆ: EEE/HKTD/AEE/(O)/AE-1/2024-25/14290, Dated: 19/03/2025 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
14. ಅರ್ಜಿದಾರರು ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ನಿಯಮಿತ ರವರ ಪತ್ರ ಸಂಖ್ಯೆ: DE/SAN/BG/NOC HRB (S-11)/2020-21/81Dated @ BG-41, Dated: 25/08/2020 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು..
15. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರ ಪತ್ರ ಸಂಖ್ಯೆ: CTE-129556, PCBID - 252604, INW ID-285125, Date: 21/12/2024 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
16. ಅರ್ಜಿದಾರರು ಯಲಹಂಕ ಏರ್‌ಫೋರ್ಸ್ ರವರ ಪತ್ರ ಸಂಖ್ಯೆ: TC/4906/2/ATS(Ty BM-MXXIX) Date: 18/02/2025 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
17. ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.
18. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rain Water harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಗಿಡ/ಮರವನ್ನು ಬೆಳೆಸತಕ್ಕದ್ದು.
19. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.
20. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ಕಟ್ಟಡ ನಕ್ಷೆಗಳನ್ನು ಕಟ್ಟಡಗಳ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.
21. ಪ್ರಶ್ನಿತ ಪ್ರದೇಶದಲ್ಲಿ ಉದ್ದೇಶಿಸಿರುವ ವಸತಿ ಉಪಯೋಗದ್ದ ಕಟ್ಟಡಗಳ ನಿರ್ಮಾಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.
22. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.
23. ಈ ಅನುಮತಿಯನ್ನು ಉಲ್ಲಂಘಿಸಿ ವ್ಯತಿರಿಕ್ತವಾಗಿ ಅಭಿವೃದ್ಧಿಗಳನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.
24. ಪ್ರಶ್ನಿತ ಪ್ರದೇಶವು ಅಂತರಾಷ್ಟ್ರೀಯ ವಾಯು ನೆಲೆಯ ಪರಿಸರದಲ್ಲಿ ಬರುವುದರಿಂದ ಶಬ್ದಮಾಲಿನ್ಯ ಸಹಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

25. ವಸತಿ ಉಪಯೋಗದ ಕಟ್ಟಡಗಳ ಅನುಮೋದನೆ ಸಂಬಂಧ ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ ನಿರಾಕ್ಷೇಪಣಾ ಪತ್ರಗಳನ್ನು ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

26. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಫೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತನ್ನಿಂದ ತಾನೆ ರದ್ದಾಗುತ್ತದೆ.

20/03/2024

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

***ಇವರಿಗೆ:***

**ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು,**
ದೊಡ್ಡಜಾಲ ಗ್ರಾಮ ಪಂಚಾಯ್ತಿ,
ಯಲಹಂಕ ತಾಲ್ಲೂಕು,
ಬೆಂಗಳೂರು ನಗರ ಜಿಲ್ಲೆ.
} ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

**ಪ್ರತಿಯನ್ನು:**

1. **ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ,** ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು-560027 ಇವರ ಮಾಹಿತಿಗಾಗಿ ಕಳುಹಿಸಿದೆ.
2. **"ಮೆ॥ ಇಕೋಸ್ ಆಫ್ ಈಡನ್" ರ ಪರವಾಗಿ ಪಾಲುದಾರರು ಶ್ರೀ ಮೇಡ ಶ್ರೀಧರ್ ಬಿನ್ ಮೇಡ ಸೂರ್ಯನಾರಾಯಣಶೆಟ್ಟಿ ಮತ್ತು ಶ್ರೀಮತಿ ಸುಮ ಶ್ರೀಧರ್ ಕೋಂ ಮೇಡ ಶ್ರೀಧರ್,** ನಂ.275, ಅಮ್ಮನ ಮನೆ, 36 'ಎ' ಕ್ರಾಸ್, 7ನೇ ಬ್ಲಾಕ್, ಜಯನಗರ, ಬೆಂಗಳೂರು-560070 ರವರ ಮಾಹಿತಿಗಾಗಿ.
3. **ಕಛೇರಿ ಪ್ರತಿ.**